ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿ ಮಕ್ಕಳ ಶೈಕ್ಷಣಿಕ ಪ್ರಗತಿಯ ಬಗ್ಗೆ

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

877 (907) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕೊರೋನ ಬಂದ ಹಿನ್ನೆಲೆಯಲ್ಲಿ ಮಕ್ಕಳ ಶೈಕ್ಷಣಿಕ ಪ್ರಗತಿ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಶೈಕ್ಷಣಿಕ ಪ್ರಗತಿಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ವಿದ್ಯಾಗಮ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಗಿದೆ; ಇದರ ಉಪಯೋಗಗಳೇನು;

(ಇ) ವಿದ್ಯಾಗಮ ಯೋಜನೆಯಿಂದ ಬೀದರ್ ಜಿಲ್ಲೆಯಲ್ಲಿ ಎಷ್ಟು ವಿದ್ಯಾರ್ಥಿಗಳು ಉಪಯೋಗವನ್ನು ಪಡೆದುಕೊಂಡಿದ್ದಾರೆ? (ತಾಲ್ಲೂಕುವಾರು ವಿವರ ನೀಡುವುದು)